# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 876 (1040)
ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆ ಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 17.03.2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರ ನಿಗಧಿಪಡಿಸಿದ್ದ ಟಿ.ಸಿ.ಹೆಚ್ ವಿದ್ಯಾರ್ಹತೆ ಪಡೆದು ಬಹಳ ವರ್ಷಗಳಿಂದ ಸೇವಾ ಹಿರಿತನ ಪದವಿ ವಿದ್ಯಾರ್ಹತೆ ಪಡೆದಿರುವ ಪಿ.ಎಸ್.ಟಿ ಶಿಕ್ಷಕರುಗಳಿಗೆ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಪದೋನ್ನತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಯ ಬಡ್ತಿಗೆ ಸಂಬಂಧಿಸಿದಂತೆ 2016 ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿದ್ದು, ಅದರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ (PST) ವೃಂದಕ್ಕೆ ಅರ್ಹತೆ ಮತ್ತು ಜೇಷ್ಠತೆ ಹೊಂದಿರುವ ಶಿಕ್ಷಕರಿಗೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ, ಪದವೀಧರ ಪ್ರಾಥಮಿಕ ಶಾಲಾ (GPT) ಶಿಕ್ಷಕರ ಬಡ್ತಿಗೆ ಸಂಬಂಧಿಸಿದಂತೆ ಮಾನದಂಡಗಳು ನಿಗಧಿಯಾಗಿರುವುದಿಲ್ಲ.<br><br>ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 6 ರಿಂದ 8ನೇ ತರಗತಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವಂತೆ ನಿರ್ದೇಶನ ನೀಡಲು ಕೋರಿ ಕೆ.ಎ.ಟಿ ಅರ್ಜಿ ಸಂಖ್ಯೆ: 3443-3503/2020/ ಮತ್ತು 857-917/ 2021 ಗಳಲ್ಲಿ ಶ್ರೀ ನಾರಾಯಣ ಬಾಳಪ್ಪ ಮತ್ತಿತರರು ದಾಖಲಿಸಿದ್ದ ದಾವೆಗೆ ಸಂಬಂಧಿಸಿದಂತೆ ನ್ಯಾಯಾಲಯವು ದಿನಾಂಕ: 12.05.2021 ರಂದು ತೀರ್ಪು ನೀಡಿದ್ದು, ಸದರಿ ತೀರ್ಪಿನಲ್ಲಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿರುತ್ತದೆ.<br><br>ಕೆ.ಎ.ಟಿ ಅರ್ಜಿ ಸಂಖ್ಯೆ: 3443-3503/2020 ಮತ್ತು ಅರ್ಜಿ ಸಂಖ್ಯೆ: 857-917/ 2021 ಗಳ ತೀರ್ಪನ್ನು ಪ್ರಶ್ನಿಸಿ ಮಾನ್ಯ ಉಚ್ಚನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅರ್ಜಿ ಸಂಖ್ಯೆ: 16936/2021 ಮೇಲ್ಮನವಿ ಸಲ್ಲಿಸಿದ್ದು ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ: 31.08.2024 ರಂದು ತೀರ್ಪು ನೀಡಿರುತ್ತದೆ. ಸದರಿ ತೀರ್ಪಿನಲ್ಲಿ ಕೆ.ಎ.ಟಿ ಆದೇಶದಂತೆ ಪದವೀಧರರ ಪ್ರಾಥಮಿಕ ಶಾಲಾ(GPT) ಶಿಕ್ಷಕರಿಗೆ ಪ್ರೌಢಶಾಲಾ ಸಹಶಿಕ್ಷಕರ ವೃಂದಕ್ಕೆ ಬಡ್ತಿ |

| | | |
|---|---|---|
| | | ನೀಡಲು 2016ರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿರುತ್ತದೆ.<br><br>ಪದವೀಧರರ ಪ್ರಾಥಮಿಕ ಶಾಲಾ(GPT) ಶಿಕ್ಷಕರಿಗೆ ಪ್ರೌಢಶಾಲಾ ಸಹಶಿಕ್ಷಕರ ವೃಂದಕ್ಕೆ ಬಡ್ತಿ ನೀಡಲು 2016 ರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲು ಉದ್ದೇಶಿಸಿ ದಿನಾಂಕ:28.08.2024 ರಂದು ಕರಡು ವೃಂದ ಮತ್ತು ನೇಮಕಾತಿ ನಿಯಮವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದ್ದು, ಪ್ರಕಟಿಸಲಾದ ಕರಡು ನಿಯಮಗಳಿಗೆ ಸುಮಾರು 75 ಸಾವಿರಕ್ಕೂ ಹೆಚ್ಚು ಸಲಹೆ ಮತ್ತು ಆಕ್ಷೇಪಣೆಗಳು ಸ್ವೀಕೃತವಾಗಿರುತ್ತವೆ. ಸ್ವೀಕೃತವಾಗಿರುವ ಸಲಹೆ ಹಾಗೂ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಅಂತಿಮ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ನಂತರ ಪ್ರಾಥಮಿಕ ಶಾಲಾ ಶಿಕ್ಷಕರಿಗೆ (PST) ಹಾಗೂ ಪದವೀಧರರ ಪ್ರಾಥಮಿಕ ಶಾಲಾ(GPT) ಶಿಕ್ಷಕರಿಗೆ ಪ್ರೌಢಶಾಲಾ ಸಹಶಿಕ್ಷಕರ ವೃಂದಕ್ಕೆ ಬಡ್ತಿ ನೀಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| ಆ) | ಇಂತಹ ಶಿಕ್ಷಕರುಗಳು ಏಳನೇ ತರಗತಿಯವರೆಗೆ ಪಾಠ ಬೋಧಿಸಲು ನಿರ್ಬಂಧ ಹೇರಿರುವುದು ನಿಜವೇ; ಹೌದಾದಲ್ಲಿ ಇದಕ್ಕೆ ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ: 19-05-2017 ರನ್ವಯ ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಪರಿಷತ್ (NCTE) ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಅಧಿನಿಯಮ 2009 (RTE) ನಿಯಮಗಳನ್ನು ಆಧರಿಸಿ ಪ್ರಾಥಮಿಕ ಶಾಲಾ ಶಿಕ್ಷಕರು ಪಿ.ಎಸ್.ಟಿ (01 ರಿಂದ 05 ನೇ ತರಗತಿ) ಜಿ.ಪಿ.ಟಿ (06 ರಿಂದ 08 ನೇ ತರಗತಿ) ಎಂಬುದಾಗಿ ವರ್ಗೀಕರಿಸಲಾಗಿದೆ. |
| ಇ) | ಈ ರೀತಿಯ ನಿಯಮ ರೂಪಿಸಲು ಸರ್ಕಾರವು ಶಿಕ್ಷಣ ತಜ್ಞರ ಅಭಿಪ್ರಾಯ ಪಡೆದಿದೆಯೇ (ವಿವರ ನೀಡುವುದು) | |

ಸಂಖ್ಯೆ: ಇಪಿ 51 ಎಲ್‌ಬಿಪಿ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.